## ಕರ್ನಾಟಕ ಸರ್ಕಾರದ ನಡವಳಿಗಳು

ಸಂ. 4732
ದಿನಾಂಕ 20/11/18
ಬೆಂಗಳೂರು

**ವಿಷಯ:** M/s Prabhuraj Solar Energy Pvt. Ltd., ರವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕ ಯೋಜನೆಯ ಅನುಷ್ಠಾನದ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ : ಇಎನ್ 55 ಎನ್‌ಸಿಇ 2017, ದಿ: 31.03.2017.
2. M/s Prabhuraj Solar Energy Pvt. Ltd., ರವರ ಪತ್ರ ಸಂಖ್ಯೆ: PSEPL/10/2018, ದಿನಾಂಕ: 14.06.2018.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ : ಕೆ.ಆರ್.ಇ.ಡಿ/07/ಎಸ್.ಜಿ/506/2018/6646, ದಿನಾಂಕ: 10.10.2018.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದ ಮೂಲಕ M/s Prabhuraj Solar Energy Pvt. Ltd., ಕಂಪನಿಯವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಡಿ 10 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿರುತ್ತದೆ.

ಸದರಿ ನಿರಾಕ್ಷೇಪಣಾ ಆದೇಶದಲ್ಲಿ ವಿಧಿಸಲಾಗಿರುವ ಷರತ್ತುಗಳ ಪೈಕಿ ಕ್ರಮ ಸಂಖ್ಯೆ (8) ರ ಷರತ್ತಿನಂತೆ ಪ್ರಸ್ತಾಪಿತ ಸೌರ ವಿದ್ಯುತ್ ಉತ್ಪಾದನಾ ಘಟಕ ಯೋಜನೆಯು ನಿರಾಕ್ಷೇಪಣಾ ಆದೇಶವನ್ನು ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳ್ಳಬೇಕಾಗಿರುತ್ತದೆ. ಕಾರಣಾಂತರಗಳಿಂದ ಪ್ರಸ್ತಾಪಿತ ಯೋಜನೆಯನ್ನು M/s Prabhuraj Solar Energy Pvt. Ltd., ಕಂಪನಿಯವರು ನಿಗದಿತ ಅವಧಿಯೊಳಗಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗದ ಕಾರಣ ಯೋಜನಾ ಅನುಷ್ಠಾನದ ಅವಧಿಯನ್ನು ವಿಸ್ತರಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದ ಮೂಲಕ ಸಲ್ಲಿಸಿದ್ದ ಕೋರಿಕೆಗೆ ಸಂಬಂಧಿಸಿದಂತೆ, ಪರಿಶೀಲಿಸಲಾಗಿ ಸದರಿ ಅಭಿವೃದ್ಧಿದಾರರು ಯೋಜನಾ ಅನುಷ್ಠಾನದ ಅವಧಿಯ ವಿಸ್ತರಣೆಗೆ ನಿಯಮಾನುಸಾರ ಅನ್ವಯವಾಗುವ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಹಾಗೂ ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಪಾವತಿಸಿರುವ ನೆರವೇರಿಕೆ ಬ್ಯಾಂಕ್ ಖಾತರಿಯ ಅವಧಿಯನ್ನು ದಿನಾಂಕ: 08.11.2019 ರವರೆಗೆ ವಿಸ್ತರಿಸಿ ಸಲ್ಲಿಸಿರುವುದರಿಂದ M/s Prabhuraj Solar Energy Pvt. Ltd., ರವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕ ಯೋಜನೆಯ ಅನುಷ್ಠಾನದ ಅವಧಿಯನ್ನು ಮುಕ್ತಾಯದ ದಿನಾಂಕದಿಂದ ಅನ್ವಯಿಸುವಂತೆ 6 ತಿಂಗಳ ಅವಧಿಗೆ ಅಂದರೆ ದಿನಾಂಕ; 01.06.2019 ರವರೆಗೆ ವಿಸ್ತರಿಸಿ ಆದೇಶವನ್ನು ಹೊರಡಿಸುವಂತೆ ಶಿಫಾರಸ್ಸು ಮಾಡಿ ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದ ಮೂಲಕ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 354 ಎನ್‌ಸಿಇ 2018**

**ಬೆಂಗಳೂರು, ದಿನಾಂಕ: 15.11.2018.**

GM (Tech) KREDL

Prabhuraj Solar Energy Pvt. Ltd., ಕಂಪನಿಯವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಲ್ಲಿ ಮೂರನೇ ವ್ಯಕ್ತಿಗೆ ಮಾರಾಟ ಮಾಡುವ

ವರ್ಗದಡಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯ ಅನುಷ್ಠಾನದ ಅವಧಿಯನ್ನು ನಿಯಮಾನುಸಾರ ಅನ್ವಯವಾಗುವ ಶುಲ್ಕಗಳನ್ನು ಪಾವತಿಸುವ ಷರತ್ತಿಗೊಳಪಟ್ಟು ದಿನಾಂಕ: 01.06.2019 ರವರೆಗೆ ವಿಸ್ತರಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಎನ್ 55 ಎನ್‌ಸಿಇ 2017, ದಿನಾಂಕ : 31.03.2017 ರಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:
1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6 ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಕೊಪ್ಪಳ ಜಿಲ್ಲೆ, ಕೊಪ್ಪಳ.
8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಗುಲ್ಬರ್ಗಾ.
9 M/s Prabhuraj Solar Energy Pvt. Ltd., Raj Nivas, Saptagiri Colony Behind KEB Grid, Hospet Road, Koppal-583231.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Prabhuraj Solar Energy Pvt. Ltd., ರವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ಓದಲಾಗಿದೆ: 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 506.

2. ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

* * *

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು
ನಂ. 1298 ದಿನಾಂಕ 4/4/17

**ಪ್ರಸ್ತಾವನೆ :-**

M/s Prabhuraj Solar Energy Pvt. Ltd., ರವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ (1) ರ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ಕೊಪ್ಪಳ<br>ತಾಲ್ಲೂಕು : ಯಲಬುರ್ಗಾ<br>ಗ್ರಾಮ : ಗಾಣದಾಳ |
| ಯೋಜನಾ ಪ್ರದೇಶದ ಜಮೀನಿನ ವಿವರ | : | ಖಾಸಗಿ |
| ಯೋಜನಾ ಪ್ರದೇಶದ ಸಮೀಪದ ಸಬ್-ಸ್ಟೇಷನ್ ವಿವರ | : | ಗಾಣದಾಳ |
| CIN ಸಂಖ್ಯೆ | : | U40100KA2009PTC049549 |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

M/s Prabhuraj Solar Energy Pvt. Ltd., ರವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣೆಯನ್ನು ನೀಡುವ ಕುರಿತು ಮೇಲೆ ಓದಲಾದ (2) ರಂತೆ ದಿನಾಂಕ: 16.2.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಸದರಿ ಶಿಫಾರಸ್ಸಿನಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 55 ಎನ್‌ಸಿಇ 2017**

**ಬೆಂಗಳೂರು, ದಿನಾಂಕ: 31.03.2017.**

M/s Prabhuraj Solar Energy Pvt. Ltd., ರವರಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ

.....2)

ವ್ಯಕ್ತಿಗೆ ಮಾರಾಟ ಮಾಡಲು (Third party sale) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. M/s Prabhuraj Solar Energy Pvt. Ltd., ರವರು ಸದರಿ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಪರವಾನಿಗೆ/ಅನುಮತಿ/ಅನುಮೋದನೆಗಳನ್ನು ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ/ಸಕ್ಷಮ ಪ್ರಾಧಿಕಾರಗಳಿಂದ ಪಡೆದುಕೊಳ್ಳತಕ್ಕದ್ದು;
2. M/s Prabhuraj Solar Energy Pvt. Ltd., ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು Independant Power Producer (IPP) Category ಯಡಿ ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ;
4. M/s Prabhuraj Solar Energy Pvt. Ltd., ರವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;
6. ಸದರಿ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸರ್ಕಾರಿ ಆದೇಶದ ಷರತ್ತುಗಳನ್ವಯ ಪ್ರಸ್ತಾವಿತ ಯೋಜನೆಯು ಪೂರ್ಣವಾಗಿ ಅನುಷ್ಠಾನಗೊಂಡ ನಂತರ ಸಂಬಂಧಪಟ್ಟ ಅಭಿವೃದ್ಧಿದಾರರಿಗೆ ಹಿಂದಿರುಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಅಗತ್ಯ ಕ್ರಮ ವಹಿಸತಕ್ಕದ್ದು;
7. M/s Prabhuraj Solar Energy Pvt. Ltd., ರವರು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
8. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.

...3)

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.

6 ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಕೊಪ್ಪಳ ಜಿಲ್ಲೆ, ಕೊಪ್ಪಳ.

8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಗುಲ್ಬರ್ಗಾ.

9 M/s Prabhuraj Solar Energy Pvt. Ltd., Raj Nivas, Saptagiri Colony Behind KEB Grid, Hospet Road, Koppal-583231.

10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.